National
Kannada
09.11.2025: 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಅಂಗೋಲಾ ಅಧ್ಯಕ್ಷರೊಂದಿಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ದ್ವಿಪಕ್ಷೀಯ ಮಾತುಕತೆ

೨. ಬಿಹಾರ ವಿಧಾನಸಭಾ ಚುನಾವಣೆ; ಮತದಾರರನ್ನು ಸೆಳೆಯಲು ರಾಜಕೀಯ ನಾಯಕರ ಅಂತಿಮ ಕಸರತ್ತು

೩. ಭಾರತದ ಆಧ್ಯಾತ್ಮಿಕ ಪರಂಪರೆಯಲ್ಲಿ ಜೈನ ತತ್ವಶಾಸ್ತ್ರದ ಕೊಡುಗೆ ಅಪಾರ- ಉಪರಾಷ್ಟ್ರಪತಿ ಸಿ.ಪಿ.ರಾಧಕೃಷ್ಣನ್

೪. ಇಂದಿನಿಂದ ಏಷ್ಯನ್ ಬಿಲ್ಲುಗಾರಿಕೆ ಚಾಂಪಿಯನ್‌ಶಿಪ್; ೧೬ ಸದಸ್ಯರ ಭಾರತ ತಂಡ ಭಾಗಿ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಎರಡು ರಾಷ್ಟ್ರಗಳ ಭೇಟಿಯ ಭಾಗವಾಗಿ ಅಂಗೋಲಾ ತಲುಪಿದ್ದಾರೆ. ಭಾರತದ ರಾಷ್ಟ್ರಪತಿಯೊಬ್ಬರು ಅಂಗೋಲಾ ಮತ್ತು ಬೋಟ್ಸ್ವಾನಾಗೆ ಭೇಟಿ ನೀಡಿರುವುದು ಇದೇ ಮೊದಲು. ಈ ಭೇಟಿಯು ಭಾರತ, ಆಫ್ರಿಕಾದೊಂದಿಗಿನ ತನ್ನ ಸಂಬಂಧವನ್ನು ಗಾಢವಾಗಿಸಲು ಮತ್ತು ಜಾಗತಿಕ ದಕ್ಷಿಣದ ರಾಷ್ಟ್ರಗಳೊಂದಿಗೆ ಪಾಲುದಾರಿಕೆಯನ್ನು ಬಲಪಡಿಸಲು ನೀಡುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ, ರಾಷ್ಟ್ರಪತಿಯವರು, ಅಂಗೋಲಾ ಅಧ್ಯಕ್ಷ ಜೊವೊ ಲೌರೆಂಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಂತರ ಅವರು ಅಂಗೋಲಾ ಸಂಸತ್ತನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ಅಂಗೋಲಾದ ಸ್ವಾತಂತ್ರ್ಯದ ೫೦ ನೇ ವಾರ್ಷಿಕೋತ್ಸವದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ತಿಂಗಳ ೧೧ ರಿಂದ ೧೩ ರವರೆಗೆ ರಾಷ್ಟ್ರಪತಿಯವರು ಬೋಟ್ಸ್ವಾನಾಗೆ ಭೇಟಿ ನೀಡಲ್ಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಬೋಟ್ಸ್ವಾನಾ ಅಧ್ಯಕ್ಷ ಡುಮಾ ಬೊಕೊ ನಡುವೆ ದ್ವಿಪಕ್ಷೀಯ ಮಾತುಕತೆ ನಡೆಯಲಿದೆ. ಅವರು ಬೋಟ್ಸ್ವಾನಾ ರಾಷ್ಟ್ರೀಯ ಸಂಸತ್ ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಐತಿಹಾಸಿಕ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆಯ

ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿಗಳು ಎರಡೂ ದೇಶಗಳ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

***************

ಬಿಹಾರ ವಿಧಾನಸಭಾ ಚುನಾವಣೆಯು ನಿರ್ಣಾಯಕ ಹಂತ ತಲುಪಿದ್ದು, ಎರಡನೇ ಮತ್ತು ಅಂತಿಮ ಹಂತದ ಪ್ರಚಾರ ಇಂದು ಸಂಜೆ ೬ ಗಂಟೆಗೆ ಮುಕ್ತಾಯಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಎನ್‌ಡಿಎ ಮತ್ತು ಮಹಾಘಟಬಂಧನ್ ಮೈತ್ರಿಕೂಟದ ನಾಯಕರು ಮತದಾರರನ್ನು ಸೆಳೆಯಲು ಅಂತಿಮ ಕಸರತ್ತು ನಡೆಸುತ್ತಿದ್ದಾರೆ. ಎರಡನೇ ಹಂತದಲ್ಲಿ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಇದೇ ೧೧ರಂದು ಮತದಾನ ನಡೆಯಲಿದೆ. ಚುನಾವಣಾ ಆಯೋಗದ ಮಾಹಿತಿಯ ಪ್ರಕಾರ, ಒಟ್ಟು ಒಂದು ಸಾವಿರದ ೩೦೨ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಹಂತದಲ್ಲಿ ೩೭ ದಶಲಕ್ಷ ಮತದಾರರು ತಮ್ಮ ಮತ ಚಲಾಯಿಸಲು ಅರ್ಹರಾಗಿದ್ದಾರೆ. ನವೆಂಬರ್ ೬ ರಂದು ನಡೆದ ಮೊದಲ ಹಂತದ ಮತದಾನದಲ್ಲಿ ಶೇಕಡ ೬೪.೬ ರಷ್ಟು ಮತದಾನ ದಾಖಲಾಗಿದೆ.

***************

ಉತ್ತರಾಖಂಡ ರಾಜ್ಯ ರಚನೆಯ ಬೆಳ್ಳಿ ಮಹೋತ್ಸವದ ಆಚರಣೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಡೆಹ್ರಾಡೂನ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿಯವರು, ಬೆಳ್ಳಿ ಮಹೋತ್ಸವ ಸ್ಮರಣಾರ್ಥ ಅಂಚೆ ಚೀಟಿಯನ್ನು ಬಿಡುಗಡೆ ಮಾಡಲಿದ್ದಾರೆ ಮತ್ತು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿಯವರು, ೯೩೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳ ಉದ್ಘಾಟನೆ ಮತ್ತು ೭ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳ ಶಂಕುಸ್ಥಾಪನೆ ಸೇರಿದಂತೆ ೮ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅವರು ಚಾಲನೆ ನೀಡಲಿದ್ದಾರೆ. ಈ ಯೋಜನೆಗಳು ಕುಡಿಯುವ ನೀರು, ನೀರಾವರಿ, ತಾಂತ್ರಿಕ ಶಿಕ್ಷಣ, ಇಂಧನ, ನಗರಾಭಿವೃದ್ಧಿ, ಕ್ರೀಡೆ ಮತ್ತು ಕೌಶಲ್ಯ ಅಭಿವೃದ್ಧಿ ಸೇರಿದಂತೆ ಹಲವಾರು ಪ್ರಮುಖ ಕ್ಷೇತ್ರಗಳನ್ನು ಒಳಗೊಂಡಿದೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿಯಲ್ಲಿ ೨೮ ಸಾವಿರಕ್ಕೂ ಹೆಚ್ಚು ರೈತರಿಗೆ ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ೬೨ ಕೋಟಿ ರೂಪಾಯಿಗಳ ಮೊತ್ತವನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಲಿದ್ದಾರೆ.

***************

ಭಾರತದ ಆಧ್ಯಾತ್ಮಿಕ ಪ್ರಯಾಣ ಮತ್ತು ಪರಂಪರೆಯಲ್ಲಿ ಜೈನ ತತ್ವಶಾಸ್ತ್ರದ ಕೊಡುಗೆಯನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಕೃಷ್ಣನ್ ಸ್ಮರಿಸಿದರು. ಕರ್ನಾಟಕದ ಹಾಸನ ಜಿಲ್ಲೆಯ ಶ್ರವಣಬೆಳಗೊಳದಲ್ಲಿಂದು ನಡೆದ ಜೈನಮುನಿ ಆಚಾರ್ಯ ಶಾಂತಿಸಾಗರ್ ಮಹಾರಾಜರ ಸ್ಮರಣಾರ್ಥ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಮಾಜದ ಆಧ್ಯಾತ್ಮಿಕ ನೀತಿಯನ್ನು ರೂಪಿಸಿದ ಜೈನ ಧರ್ಮದ ತತ್ವಗಳಾದ ಅಹಿಂಸೆ, ಸ್ವಯಂ ಸಂಯಮ ಮತ್ತು ತ್ಯಾಗದ ಮಹತ್ವವನ್ನು ಅವರು ಒತ್ತಿ ಹೇಳಿದರು. ಆಂತರಿಕ ಶಾಂತಿ ಮತ್ತು ಮೋಕ್ಷಕ್ಕಾಗಿ ಜೈನ ಆಚಾರ್ಯ ಶಾಂತಿ ಸಾಗರ್ ಮಹಾರಾಜರ ಅನ್ವೇಷಣೆಯೇ ನಮ್ಮೆಲ್ಲರಿಗೂ ಸ್ಫೂರ್ತಿ. ಯುದ್ಧ ಮತ್ತು ಸಂಘರ್ಷಗಳಿಂದ ಛಿದ್ರಗೊಂಡ ಜಗತ್ತಿನಲ್ಲಿ ಜೈನ ಧರ್ಮವು ಕಲಿಸಿದ ಶಾಂತಿ ಮತ್ತು ಸಾಮರಸ್ಯದ ಸಂದೇಶ ಹೆಚ್ಚು ಅರ್ಥಪೂರ್ಣವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಕೃಷ್ಣನ್ ಹೇಳಿದರು.

***************

ಅಮೆರಿಕದಲ್ಲಿರುವ ಭಾರತೀಯ ರಾಯಭಾರಿ ವಿನಯ್ ಮೋಹನ್ ವಾತ್ರಾ ಅವರು, ಇಂಟೆಲ್ ಮುಖ್ಯ ಕಾರ್ಯ ನಿರ್ವಹಣಾಧಾಕಾರಿ ಲಿಪ್ ಬು ಟಾನ್ ಅವರನ್ನು ಭೇಟಿಯಾಗಿ, ಕೇಂದ್ರ ಸರ್ಕಾರದ ಇಂಡಿಯಾ ಸೆಮಿಕಂಡಕ್ಟರ್ ಮಿಷನ್ ಮತ್ತು ಇಂಡಿಯಾ ಎಐ ಮಿಷನ್‌ಗೆ ಅನುಗುಣವಾಗಿ ಭಾರತದಲ್ಲಿ ಸೆಮಿಕಂಡಕ್ಟರ್ ಮತ್ತು ಎಐ ಕಾರ್ಯಾಚರಣೆಗಳನ್ನು ವಿಸ್ತರಿಸುವ ಇಂಟೆಲ್ ಯೋಜನೆಗಳ ಕುರಿತು ಚರ್ಚಿಸಿದರು. ೨೦೨೧ರಲ್ಲಿ ಫ್ಯಾಬ್ರಿಕೇಷನ್, ವಿನ್ಯಾಸ ಮತ್ತು ಉತ್ಪಾನೆಯನ್ನು ಹೆಚ್ಚಿಸಲು ೭೬ ಸಾವಿರ ಕೋಟಿ ರೂಪಾಯಿಗಳ ವೆಚ್ಚದೊಂದಿಗೆ ಸೆಮಿಕಂಡಕ್ಟರ್ ಮಿಷನ್ ಪ್ರಾರಂಭಿಸಲಾಯಿತು. ೨೦೨೫ರಲ್ಲಿ ನೋಯ್ಡಾ ಮತ್ತು ಬೆಂಗಳೂರಿನಲ್ಲಿ ದೇಶದ ಮೊದಲ ಮೂರು ನ್ಯಾನೋ ಮೀಟರ್ ಚಿಪ್ ವಿನ್ಯಾಸ ಕೇಂದ್ರಗಳನ್ನು ಉದ್ಘಾಟಿಸಲಾಯಿತು. ಐದು ಸೆಮೆಕಂಡಕ್ಟರ್ ಉತ್ಪಾದನಾ ಘಟಕಗಳು ನಿರ್ಮಾಣ ಹಂತದಲ್ಲಿವೆ.

***************

ತನ್ನ ೯೩ನೇ ವಾರ್ಷಿಕೋತ್ಸವನ್ನು ಗುರುತಿಸಲು ಭಾರತೀಯ ವಾಯುಪಡೆ ಗುವಾಹಟಿಯಲ್ಲಿಂದು ತನ್ನ ಮೊದಲ ಪೂರ್ಣ ಪ್ರಮಾಣದ ವಾಯುಪ್ರದರ್ಶನವನ್ನು ಆಯೋಜಿಸಿದೆ. ಪೂರ್ವ ವಾಯು ಕಮಾಂಡ್ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಬ್ರಹ್ಮಪುತ್ರ ನದಿಯ ಸಮೀಪದ ಲಹೀತ್ ಘಾಟ್ ಪ್ರದೇಶದಲ್ಲಿ ೭೫ಕ್ಕೂ ಹೆಚ್ಚು ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳು ಹಾರಾಟ ನಡೆಸುತ್ತಿವೆ. ಈ ಪ್ರದರ್ಶನದಲ್ಲಿ ರಫೇಲ್, ಸುಖೋಯ್-೩೦, ಅಪಾಚೆ, ಮಿಗ್-೨೯, ಐಎಲ್-೭೮, ಮಿರಾಜ್, ಜಾಗ್ವಾರ್, ಸಿ-೧೭ ಗ್ಲೋಬ್ ಮಾಸ್ಟರ್, ಎಂ.ಐ-೧೭, ಅತ್ಯಾಧುನಿಕ ಲಘು ಹೆಲಿಕಾಪ್ಟರ್ ಎಮ್.ಕೆ-೧ ಮತ್ತು ಸೂರ್ಯಕಿರಣ್ ಏರೋಬ್ಯಾಟಿಕ್ ತಂಡ ಭಾಗವಹಿಸಿವೆ.

***************

ಇಂದು ವಿಶ್ವ ಕಾನೂನು ದಿನ. ನ್ಯಾಯ, ಸಮಾನತೆ ಮತ್ತು ಕಾನೂನು ಸಬಲೀಕರಣದ ಮನೋಭಾವ ಹೊಂದುವಂತೆ ಜನರನ್ನು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಒತ್ತಾಯಿಸಿದ್ದಾರೆ. ಕಾನೂನು ಪ್ರವೇಶ ಒಂದು ಹಕ್ಕು. ಸವಲತ್ತಲ್ಲ ಎಂಬುದನ್ನು ಈ ದಿನ ಎಲ್ಲರಿಗೂ ನೆನಪಿಸುತ್ತದೆ. ಕಾನೂನು ನೆರವು ಮತ್ತು ನ್ಯಾಯ ಸಮಾಜದ ಪ್ರತಿಯೊಬ್ಬರಿಗೂ ತಲುಪುವುದನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಗಳನ್ನು ಬಲಪಡಿಸಬೇಕು ಎಂದು ಅವರು ಮನವಿ ಮಾಡಿದರು.

***************

ಪ್ರಧಾನಿ ನರೇಂದ್ರ ಮೋದಿ ಈ ತಿಂಗಳ ೧೧ ರಿಂದ ಎರಡು ದಿನಗಳ ಕಾಲ ಭೂತಾನ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಪ್ರಧಾನಿ ಮೋದಿ ಮತ್ತು ಭೂತಾನ್ ರಾಜ ಜಿಗ್ಮೆ ಖೇಸರ್ ನಮ್ಗ್ಯೆಲ್ ವಾಂಗ್‌ಚುಕ್, ಒಂದು ಸಾವಿರ ಇಪ್ಪತ್ತು ಮೆಗಾವ್ಯಾಟ್ ಸಾಮರ್ಥ್ಯದ ಪುನತ್ಸಂಗ್‌ಚು ಜಲವಿದ್ಯುತ್ ಯೋಜನೆಯನ್ನು ಉದ್ಘಾಟಿಸಲಿದ್ದಾರೆ. ಈ ಯೋಜನೆಯನ್ನು ಭಾರತ ಮತ್ತು ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಭೂತಾನ್‌ನ ನಾಲ್ಕನೇ ರಾಜ ಜಿಗ್ಮೆ ಸಿಂಗ್ಯೆ ವಾಂಗ್‌ಚುಕ್ ಅವರ ೭೦ನೇ ಜನ್ಮ ವಾರ್ಷಿಕೋತ್ಸವಕ್ಕೆ ಮೀಸಲಾಗಿರುವ ಆಚರಣೆಗಳಲ್ಲಿ ಪ್ರಧಾನಿ ಮೋದಿ ಭಾಗವಹಿಸಲಿದ್ದಾರೆ. ನಂತರ ಭೂತಾನ್ ಪ್ರಧಾನಿ ತ್ಶೆರಿಂಗ್ ಟೋಬ್ಗೇ ಅವರನ್ನು ಭೇಟಿ ಮಾಡಲಿದ್ದಾರೆ. ಇದೇ ವೇಳೆ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಭಾಗವಹಿಸಲಿದ್ದಾರೆ ಮತ್ತು ಥಿಂಪುವಿನ ತಾಶಿಚೋಡ್‌ಜಾಂಗ್‌ನಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯು ಭಾರತ-ಭೂತಾನ್ ದ್ವಿಪಕ್ಷೀಯ ಪಾಲುದಾರಿಕೆಯನ್ನು ಮತ್ತಷ್ಟು ವರ್ಧಿಸುವ ಮತ್ತು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಲು ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ವ್ಯಾಪಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಎರಡೂ ಕಡೆಯವರಿಗೆ ಅವಕಾಶವನ್ನು ಒದಗಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಭಾರತದ ೧೬ ಸದಸ್ಯರ ಬಿಲ್ಲುಗಾರಿಕೆ ತಂಡವು ಇಂದಿನಿಂದ ೧೪ರವರೆಗೆ ಬಾಂಗ್ಲಾದೇಶದ ಢಾಕಾದಲ್ಲಿ ನಡೆಯುವ ಏಷ್ಯನ್ ಬಿಲ್ಲುಗಾರಿಕೆ ಚಾಂಪಿಯನ್‌ಶಿಪ್-೨೦೨೫ರಲ್ಲಿ ಸ್ಪರ್ಧಿಸಲಿದೆ. ಅಭಿಷೇಕ್ ವರ್ಮಾ ಮತ್ತು ಪ್ರಥಮೇಶ್ ಜಾವ್‌ಕರ್ ಸಂಯುಕ್ತ ಪುರುಷರ ತಂಡವನ್ನು ಮುನ್ನೆಡೆಸಿದರೆ, ದೀಪಿಕಾ ಕುಮಾರಿ ಮಹಿಳಾ ತಂಡವನ್ನು ಮುನ್ನೆಡೆಸಲಿದ್ದಾರೆ.

***************